# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 677(785)
ಸದಸ್ಯರ ಹೆಸರು : ಶ್ರೀ ಮುನಿರಾಜು ಗೌಡ ಪಿ ಎಂ
ಉತ್ತರಿಸುವ ದಿನಾಂಕ : 12.12.2023
ಉತ್ತರಿಸುವ ಸಚಿವರು : ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕಳೆದ 5 ವರ್ಷಗಳಲ್ಲಿ ರಾಜ್ಯದಲ್ಲಿ ಗ್ರಾಮ ಪಂಚಾಯಿತಿಯಿಂದ ನಗರ ಸ್ಥಳೀಯ ಸಂಸ್ಥೆಗಳಿಗೆ ಉನ್ನತೀಕರಣಗೊಂಡ ನಗರ ಸ್ಥಳೀಯ ಸಂಸ್ಥೆಗಳ ಸಂಖ್ಯೆ ಎಷ್ಟು; | ಕಳೆದ 5 ವರ್ಷಗಳಲ್ಲಿ ರಾಜ್ಯದಲ್ಲಿ ಗ್ರಾಮ ಪಂಚಾಯಿತಿಯಿಂದ ನಗರ ಸ್ಥಳೀಯ ಸಂಸ್ಥೆಗಳಿಗೆ ಉನ್ನತೀಕರಣಗೊಂಡ ನಗರ ಸ್ಥಳೀಯ ಸಂಸ್ಥೆಗಳ ಸಂಖ್ಯೆ: **35** |
| (ಆ) | ಈ ಹಿಂದೆ ಗ್ರಾಮ ಪಂಚಾಯಿತಿಯಿಂದ ಇ- ಸ್ವತ್ತು ವಿತರಣೆಯಾಗಿದ್ದಲ್ಲಿ ಅಂತಹ ಸ್ವತ್ತುಗಳಿಗೆ ನಗರ ಸ್ಥಳೀಯ ಸಂಸ್ಥೆಗಳು ಇ-ಖಾತೆಯನ್ನು ವಿತರಿಸಲು ಅನುಸರಿಸುವ ಕ್ರಮವೇನು; | ಸರ್ಕಾರದ ಸುತ್ತೋಲೆ ದಿನಾಂಕ:02.01.2023ರಲ್ಲಿ ಸ್ಥಳೀಯ ಯೋಜನಾ ವ್ಯಾಪ್ತಿಯ ಹೊರಭಾಗದಲ್ಲಿ ಬರುವ ಗ್ರಾಮ ಪಂಚಾಯಿತಿಗಳನ್ನು ನಗರ ಸ್ಥಳೀಯ ಸಂಸ್ಥೆಗಳಾಗಿ ಮೇಲ್ದರ್ಜೆಗೇರಿಸಿದ ನಂತರ ಗ್ರಾಮ ಪಂಚಾಯಿತಿ ಅವಧಿಯಲ್ಲಿ ಇ-ಸ್ವತ್ತು ತಂತ್ರಾಂಶದಡಿ ತೆರೆಯಲಾದ ಖಾತೆಗಳನ್ನು ಇ-ಆಸ್ತಿ ತಂತ್ರಾಂಶದಲ್ಲಿ ದಾಖಲಿಸಲು ಸೂಚಿಸಿದೆ. |
| (ಇ) | ಗ್ರಾಮಠಾಣಾ ವ್ಯಾಪ್ತಿಯ ಸ್ವತ್ತುಗಳು ನಮೂನೆ-9 ಮತ್ತು 11 ರಲ್ಲಿ ಇದ್ದಲ್ಲಿ, ಸದರಿ ಆಸ್ತಿಗಳ ಪಿತ್ರಾರ್ಜಿತ ಆಸ್ತಿಯಾಗಿದ್ದರೆ. ಅಳತೆ ಮಾಡಿ ಇ-ಸ್ವತ್ತು ನೀಡಲಾಗುತ್ತಿದ್ದು, ಆದರೆ ನಗರ ಸ್ಥಳೀಯ ಸಂಸ್ಥೆಗಳು ಇ-ಸ್ವತ್ತು ನೀಡಲು ಹಲವು ದಾಖಲೆಗಳನ್ನು ಕೇಳುತ್ತಿರುವುದರಿಂದ ಅಂತಹ ದಾಖಲೆಗಳು ಸಾರ್ವಜನಿಕರ ಬಳಿ ಲಭ್ಯವಿಲ್ಲದೆ ತೊಂದರೆಗೆ ಒಳಗಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇಂತಹ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮವೇನು? | ಪೌರಾಡಳಿತ ನಿರ್ದೇಶನಾಲಯದ ಸುತ್ತೋಲೆ ದಿನಾಂಕ:20.04.2016 ರಲ್ಲಿ ಇ-ಆಸ್ತಿ ತಂತ್ರಾಂಶದಲ್ಲಿ ನಮೂನೆ-3 ಸೃಜಿಸಿ ನೀಡಲು ಆದೇಶಿಸಲಾಗಿರುತ್ತದೆ ಗ್ರಾಮಠಾಣ ವ್ಯಾಪ್ತಿಯಲ್ಲಿರುವ ಆಸ್ತಿಗಳಿಗೆ ನಮೂನೆ-3 ವಿತರಿಸಲು ಸೂಚಿಸಲಾಗಿರುತ್ತದೆ. ಸದರಿ ಸುತ್ತೋಲೆಯಲ್ಲಿ ತಹಶೀಲ್ದಾರ್/ಸರ್ವೆಯರ್ ನೀಡಿರುವ ಗ್ರಾಮಠಾಣ ಪ್ರದೇಶದ ಆದೇಶದ ಪ್ರತಿ ಮತ್ತು ನಮೂನೆ-9 ರ ಪ್ರತಿ ಸಲ್ಲಿಸಿ, ನಮೂನೆ-3 ಪಡೆಯಲು ಅವಕಾಶ ಕಲ್ಪಿಸಿದೆ. |

**ಸಂಖ್ಯೆ:** ನಅಇ 207 ಜಿಇಎಲ್ 2023

(ರಹೀಂ ಖಾನ್)
ಪೌರಾಡಳಿತ ಮತ್ತು ಹಜ್ ಸಚಿವರು
RAHIM KHAN
Minister for Municipal Administration and Haj